ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS
4

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 4/8/20

# ಎಚ್‌ಕೆ ದೂರು: ಮಾನವ ಹಕ್ಕು ಆಯೋಗಕ್ಕೆ ವಿವರಣೆ

ಬೆಂಗಳೂರು: ಕೊರೋನಾ ಸೋಂಕಿತರಿಗೆ ಚಿಕಿತ್ಸೆ ನೀಡದ ಖಾಸಗಿ ಆಸ್ಪತ್ರೆಗಳ ವಿರುದ್ಧ ಪ್ರಕರಣ ದಾಖಲಿಸಿ ಶಿಸ್ತು ಕ್ರಮ ಕೈಗೊಳ್ಳಲಾ ಗುವುದು ಎಂದು ಮಾನವ ಹಕ್ಕುಗಳ ಆಯೋಗಕ್ಕೆ ಸರ್ಕಾರ ತಿಳಿಸಿದೆ.

ರಾಜ್ಯದಲ್ಲಿ ಕೊರೋನಾ ಸೋಂಕಿನಿಂದ ಮೃತ ಪಟ್ಟವರನ್ನು ಅಮಾನವೀಯವಾಗಿ ಶವಸಂಸ್ಕಾರ ಮಾಡುತ್ತಿರುವುದು, ಸೋಂಕಿತರನ್ನು ಸಾಗಿಸಲು ಆ್ಯಂಬುಲೆನ್ಸ್ ಮತ್ತು ಆಸ್ಪತ್ರೆಗಳಲ್ಲಿ ವ್ಯವಸ್ಥೆ ಮಾಡದ ಕುರಿತ ದೂರಿನ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ನ್ಯಾ। ಡಿ. ಎಚ್. ವಘೇಲಾ ಮತ್ತು ಸದಸ್ಯರಾದ ಆರ್.ಕೆ. ದತ್ತ ಅವರ ದ್ವಿಸದಸ್ಯ ಪೀಠದ ಮುಂದೆ ವಿವರಿಸಿದರು.

ವಿಚಾರಣೆಗೆ ಹಾಜರಾಗಿದ್ದ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್, ಸೋಂಕಿತರಿಗೆ ಚಿಕಿತ್ಸೆ ನೀಡದ ಆಸ್ಪತ್ರೆಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದರು.